## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.

## ಸಿ.ಸಿ. ನಂ.1698/2022

ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಹೆಸರು | ಃ ಓಬಳೇಶ | ಸಿಡಬ್ಲ್ಯೂ -11 |
| ತಂದೆ/ ಗಂಡನ ಹೆಸರು | ಃ ತಿಪ್ಪೇಸ್ವಾಮಿ | ಪಿ ಡಬ್ಲ್ಯೂ-6 |
| ವಯಸ್ಸು | ಃ 32 ವರ್ಷ | |
| ಉದ್ಯೋಗ | ಃ ಕೂಲಿಕೆಲಸ | |
| ವಾಸಸ್ಥಳ | ಃ ಚಳ್ಳಕೆರೆ ಟೌನ್ | ದಿಃ19-03-2025. |

### ಮುಖ್ಯ ವಿಚಾರಣೆ ಃ ಮಾನ್ಯ ಎ.ಪಿ.ಪಿ. ರವರಿಂದಃ

ಮೃತ ಗಂಗಮ್ಮ ನನಗೆ ಗೊತ್ತಿಲ್ಲ. ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಅಪಘಾತವನ್ನು ನಾನು ಕಣ್ಣಾರೆ ಕಂಡಿಲ್ಲ ಅಪಘಾತ ಹೇಗೆ ಮತ್ತು ಯಾರ ತಪ್ಪಿ ನಿಂದ ಆಯಿತು ಅಂತಾ ನನಗೆ ಗೊತ್ತಿಲ್ಲ. ಅಪಘಾತದಲ್ಲಿ ಒಳಗೊಂಡ ವಾಹನಗಳ ಬಗ್ಗೆ ನನಗೆ ಮಾಹಿತಿ ಇಲ್ಲ. ಈಗ ನ್ಯಾಯಾಲಯದ ಮುಂದೆ ಇರುವ ಆರೋಪಿತನನ್ನು ನೋಡುತ್ತಿದ್ದು ಆತನ ಬಗ್ಗೆ ನನಗೆ ಗೊತ್ತಿಲ್ಲ. ಅಪಘಾತವನ್ನು ನಾನು ಕಣ್ಣಾರೆ ಕಂಡಿಲ್ಲ ಈ ಕುರಿತು ನಾನು ಪೋಲೀಸರಿಗೆ ಯಾವುದೇ ಹೇಳಿಕೆ ಮತ್ತು ಮರು ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

### ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ

ದಿಃ05-02-2022 ರಂದು ಬೆಳಿಗ್ಗೆ 11 ಗಂಟೆ ಸಮಯದಲ್ಲಿ ನಾನು ಪರಶುರಾಂಪುರದಿಂದ ಚಳ್ಳಕೆರೆ ಕಡೆಗೆ ಬರುವಾಗ ನನ್ನ ಎದುರಿಗೆ ಒಂದು ಬೈಕಿನಲ್ಲಿ ಒಬ್ಬ ವ್ಯಕ್ತಿಯು ಹಿಂಬದಿ ಸೀಟಿನಲ್ಲಿ ಒಬ್ಬ ಹೆಂಗಸನ್ನು ಕೂರಿಸಿಕೊಂಡು ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ರಸ್ತೆಯಲ್ಲಿದ್ದ ತಗ್ಗು ಗುಂಡಿಗಳ ಮೇಲೆ ಬೈಕಿನ ಚಕ್ರವನ್ನು ಹತ್ತಿಸಿದ್ದರಿಂದಹಿಂಬದಿ ಸೀಟಿನಲ್ಲಿದ್ದ ಮಹಿಳೆಯ ಆಯ ತಪ್ಪಿ ಕೆಳಗೆ ಬಿದ್ದು ತಲೆಗೆ ಹಾಗೂ ಮೈಕೈಗೆ ಬಲವಾದ ಪೆಟ್ಟು ಬಿದ್ದು ರಕ್ತಗಾಯಗಳಾಗಿರುತ್ತವೆ ಎಂದರೆ ಸರಿಯಲ್ಲ. ಅಪಘಾತಪಡಿಸಿದ ಬೈಕ್ ನಂ.ಕೆಎ-16-ಇಇ-7502 ಆಗಿದ್ದು, ಅದರ ಚಾಲಕನ ಹೆಸರು ಕೇಳಲಾಗಿ ರಮೇಶ ತಂದೆ ರಾಜಪ್ಪ ಹಾಗೂ ಗಾಯಾಳುವಿನ ಹೆಸರು ಗಂಗಮ್ಮ ಗಂಡ ವೆಂಕಟೇಶ ಎಂದು ತಿಳಿಯಿತು ಎಂದರೆ ಸರಿಯಲ್ಲ. ನಂತರ ಗಾಯಾಳುವನ್ನು ನಾನು ಹಾಗೂ ಆರೋಪಿಯು ಸೇರಿ

ಆಸ್ಪತ್ರೆಗೆ ದಾಖಲು ಮಾಡಿರುತ್ತೇವೆ ಎಂದರೆ ಸರಿಯಲ್ಲ. ಅಪಘಾತ ಸಮಯದಲ್ಲಿ ಆರೋಪಿಯನ್ನು ನೋಡಿದ್ದು, ಪುನಃ ನೋಡಿದರೆ ಗುರುತಿಸುತ್ತೇನೆ ಎಂದು ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿಃ10 ಎಂದು ಗುರುತಿಸಲಾಯಿತು.

ನಂತರ 25-04-2022 ರಂದು ನಾನು ಪೊಲೀಸರ ಮುಂದೆ ಗಾಯಾಳು ಗಂಗಮ್ಮರವರು ದಿಃ22-04-2022 ರಂದು ಬೆಳಿಗ್ಗೆ 5 ಗಂಟೆ ಸಮಯದಲ್ಲಿ ದಾವಣಗೆರೆ ಚಿಗಟೇರಿ ಜಿಲ್ಲಾ ಆಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾರೆ ಎಂಬ ವಿಚಾರ ತಿಳಿದು ಈಗ ಓದಿ ಹೇಳಿದಂತೆ ಮರು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಮರು ಹೇಳಿಕೆಯನ್ನು ನಿಪಿಃ11 ಎಂದು ಗುರುತಿಸಲಾಯಿತು.

ನ್ಯಾಯಾಲಯದ ಮುಂದಿರುವ ಆರೋಪಿಯನ್ನು ಅಪಘಾತ ಸಮಯದಲ್ಲಿ ನೋಡಿದ್ದರೂ ಸಹ ಆರೋಪಿತನಿಗೆ ಸಹಾಯ ಮಾಡಲು ಈಗ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಶ್ರೀ ಬಿ ಸಿ ಬಿ., ಆರೋಪಿಯ ಪರ ವಕೀಲರಿಂದಃ</u>

ಆರೋಪಿಯ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದ ಕಾರಣ ಸದರಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ